**Bangalore**
**Regional News**
**02.08.2025 / 2.30 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ೨೦ನೇ ಕಂತಿನ ಹಣ ಬಿಡುಗಡೆ : ರಾಜ್ಯದ ೪೩ ಲಕ್ಷಕ್ಕೂ ಹೆಚ್ಚು ಅರ್ಹ ರೈತರಿಗೆ ಹಣ ಸಂದಾಯ

2. ರಸಗೊಬ್ಬರ ಅಕ್ರಮ ಮಾರಾಟ ; ದಾವಣಗೆರೆ ಜಿಲ್ಲೆಯ ಎಂಟು ರಸಗೊಬ್ಬರ ಮಾರಾಟಗಾರರ ಪರವಾನಗಿ ರದ್ದು

3. ಹೂವಿನಕೋಣಿ ಶಾಲೆಯಲ್ಲಿ ನೀರಿನ ತೊಟ್ಟಿಗೆ ವಿಷ ಬೆರೆಸಿದ ಪ್ರಕರಣ ; ತನಿಖೆಗಾಗಿ ಮೂರು ಪೊಲೀಸ್ ತಂಡಗಳ ರಚನೆ

4. ದಕ್ಷಿಣ ಕನ್ನಡ ಜಿಲ್ಲೆಯ ಎಲ್ಲ ತಾಲೂಕು ಆಸ್ಪತ್ರೆಗಳಲ್ಲಿ ಸ್ತ್ರೀರೋಗ, ಅರಿವಳಿಕೆ, ಮಕ್ಕಳ ತಜ್ಞರ ಶೀಘ್ರ ನೇಮಕ - ಆರೋಗ್ಯ ಸಚಿವ

<><><><>

ಉತ್ತರ ಪ್ರದೇಶದ ವಾರಾಣಸಿಯಲ್ಲಿಂದು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯ ೨೦ನೇ ಕಂತಿನ ಹಣವನ್ನು ಪ್ರಧಾನಿ ನರೇಂದ್ರ ಮೋದಿ ಬಿಡುಗಡೆ ಮಾಡಿದರು. ಬಳಿಕ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆ ಅಡಿಯಲ್ಲಿ ದೇಶದ ಹತ್ತು ಕೋಟಿ ರೈತರ ಖಾತೆಗಳಿಗೆ ನೇರವಾಗಿ ೨೧ ಸಾವಿರ ಕೋಟಿ ರೂಪಾಯಿಯನ್ನು ಜಮೆ ಮಾಡಲಾಗಿದೆ ಎಂದು ಹೇಳಿದರು. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯ ೨೦ನೇ ಕಂತಿನ ಬಿಡುಗಡೆಯ ಮೂಲಕ ಪ್ರಧಾನಿ ಅವರು, ೯ ಕೋಟಿ ೧೦ ಲಕ್ಷ ರೈತರ ಖಾತೆಗಳಿಗೆ ನೇರವಾಗಿ ಒಟ್ಟು ೨೦ ಸಾವಿರದ ೫೦೦ ಕೋಟಿ ರೂಪಾಯಿ ಜಮೆ ಮಾಡುವ ಪ್ರಕ್ರಿಯೆಗೆ ಚಾಲನೆ ನೀಡಿದರು. ಇದರಿಂದ ಪಿಎಂ ಕಿಸಾನ್ ಯೋಜನೆಯಡಿ ಒಟ್ಟು ಬಿಡುಗಡೆಗೊಳಿಸಿದ ಮೊತ್ತ ೩ ಲಕ್ಷ ೯೦ ಸಾವಿರ ರೂಪಾಯಿಗೆ ಏರಿಕೆಯಾಗಿದೆ.

<><><><>

ಧಾರವಾಡ ಜಿಲ್ಲೆಯ ೯೯ ಸಾವಿರದ ೯೮೩ ಅರ್ಹ ಫಲಾನುಭವಿ ರೈತರಿಗೆ ೨೦ ಕೋಟಿ ೧೫ ಲಕ್ಷ ರೂಪಾಯಿ ನೇರವಾಗಿ ಬ್ಯಾಂಕ್ ಖಾತೆಗೆ ಜಮೆಯಾಗಿದೆ ಎಂದು ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಧಾರವಾಡ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ರೈತರ ಜ್ಞಾನಾಭಿವೃದ್ಧಿ ಕೇಂದ್ರದಲ್ಲಿ ಪ್ರಧಾನಮಂತ್ರಿ ಕಿಸಾನ್

ಸಮ್ಮಾನ್ ನಿಧಿ ಬಿಡುಗಡೆ ಕಾರ್ಯಕ್ರಮದಲ್ಲಿ ಅವರು ಭಾಗವಹಿಸಿ ರೈತರೊಂದಿಗೆ ಸಂವಾದ ನಡೆಸಿದರು.

<><><>

ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ೬ ಸಾವಿರ ರೂಪಾಯಿ ಹಣ ಯಾವುದೇ ಮಧ್ಯವರ್ತಿಗಳಿಲ್ಲದೇ ರೈತರ ಖಾತೆಗೆ ನೇರವಾಗಿ ತಲುಪುತ್ತಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಹಾಡೋನಹಳ್ಳಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ಆಯೋಜಿಸಲಾಗಿದ್ದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ರೈತರ ಖಾತೆಗೆ ೧೦ನೇ ಕಂತಿನ ಹಣವನ್ನು ಬಿಡುಗಡೆ ಮಾಡುವ ಕಾರ್ಯಕ್ರಮದ ನೇರ ಪ್ರಸಾರವನ್ನು ರೈತರೊಂದಿಗೆ ವೀಕ್ಷಿಸಿ, ನಂತರ ಅವರು ಮಾತನಾಡಿದರು. ಪಿಎಂ ಕಿಸಾನ್ ಯೋಜನೆಯಡಿ ಇಲ್ಲಿಯವರೆಗೆ ದೇಶದಾದ್ಯಂತ ೩ ಲಕ್ಷ ೮೯ ಸಾವಿರ ಕೋಟಿ ರೂಪಾಯಿ ಹಣ ರೈತರಿಗೆ ಸಂದಾಯವಾಗಿದೆ. ಈ ಯೋಜನೆಯಡಿ ಕರ್ನಾಟಕದಲ್ಲಿ ೭೮ ಸಾವಿರದ ೯೧೧ ಕೋಟಿ ರೂಪಾಯಿ ರೈತರ ಕೈ ಸೇರಿದೆ. ರಾಜ್ಯದಲ್ಲಿ ಸುಮಾರು ೪೩ ಲಕ್ಷದ ೧೮ ಸಾವಿರದ ೯೦೫ ಅರ್ಹ ರೈತರು ಯೋಜನೆಯ ಲಾಭ ಪಡೆದಿದ್ದಾರೆ ಎಂದು ಸಚಿವ ವಿ.ಸೋಮಣ್ಣ ವಿವರಿಸಿದರು.

<><><>

ದೇಶದ ರೈತರ ಏಳಿಗೆಗೆ ಸಹಕಾರ ನೀಡುವ ನಿಟ್ಟಿನಲ್ಲಿ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ಪ್ರತಿ ರೈತರ ಖಾತೆಗಳಿಗೆ ಇಂದು ೨ ಸಾವಿರ ರೂಪಾಯಿ ತಲುಪಿದೆ ಎಂದು ಕೇಂದ್ರ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ. ಬೆಂಗಳೂರು ನಗರದ ಯಲಹಂಕ ಬಳಿಯಿರುವ ಐಸಿಎಆರ್ ಆವರಣದಲ್ಲಿ ಏರ್ಪಡಿಸಲಾಗಿದ್ದ ಪಿಎಂ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ೧೦ನೇ ಕಂತಿನ ಹಣ ಬಿಡುಗಡೆ ನೇರ ಪ್ರಸಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

<><><>

ದಾವಣಗೆರೆ ಜಿಲ್ಲೆಯಲ್ಲಿ ಸಗಟು ಮಾರಾಟಗಾರರಿಗೆ ಹಂಚಿಕೆಯಾದ ರಸಗೊಬ್ಬರವನ್ನು ಚಿಲ್ಲರೆ ಮಾರಾಟಗಾರರಿಗೆ ಪೂರೈಕೆ ಮಾಡದೆ ಬೇರೆ ಜಿಲ್ಲೆಗಳಿಗೆ ಮಾರಾಟ ಮಾಡಿದ ೮ ಪರವಾನಿಗೆಗಳನ್ನು ರದ್ದುಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಬಿ.ಎಂ.ಗಂಗಾಧರ್ ಸ್ವಾಮಿ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಯೂರಿಯಾ ರಸಗೊಬ್ಬರದ ಕೊರತೆಯಾಗಿದೆ ಎಂಬ ವರದಿ ಹಿನ್ನೆಲೆಯಲ್ಲಿ ಜಿಲ್ಲೆಯ ಎಲ್ಲಾ ಸಗಟು ಮತ್ತು ಚಿಲ್ಲರೆ ಮಾರಾಟ ಮಳಿಗೆಗಳ ತಪಾಸಣೆಯನ್ನು ಕಂದಾಯ ಅಧಿಕಾರಿಗಳು ಮತ್ತು ಕೃಷಿ ಅಧಿಕಾರಿ, ಪೊಲೀಸ್ ಅಧಿಕಾರಿಗಳೊಂದಿಗೆ ಜಂಟಿ ತಪಾಸಣೆ ನಡೆಸಿ, ನಿಯಮಗಳನ್ನು ಉಲ್ಲಂಘನೆ ಮಾಡಿದವರ ಮೇಲೆ ಕಠಿಣ ಕ್ರಮ ಕೈಗೊಳ್ಳಲಾಗಿದೆ ಎಂದು ಅವರು

ಹೇಳಿದ್ದಾರೆ. ಜಿಲ್ಲೆಯಲ್ಲಿ ಯೂರಿಯಾ ಹೊರತುಪಡಿಸಿ, ಇತರೆ ರಸಗೊಬ್ಬರಗಳ ವ್ಯತ್ಯಯ ಉಂಟಾಗಿಲ್ಲ. ಹರಳು ಯೂರಿಯಾಗೆ ಹೆಚ್ಚಿನ ಬೇಡಿಕೆ ಬಂದಿದ್ದರಿಂದ ರೈತರಲ್ಲಿ ಆತಂಕವಾಗಿತ್ತೆ ವಿನಃ ಬೇಡಿಕೆಯಷ್ಟು ಪೂರೈಕೆ ಮತ್ತು ಹಂಚಿಕೆಯಾಗಿರುತ್ತದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ. ಮಂಡ್ಯ ಜಿಲ್ಲೆಯಲ್ಲಿ ಯೂರಿಯಾ ರಸಗೊಬ್ಬರದ ಕೊರತೆ ಇಲ್ಲ. ರೈತರು ಆತಂಕಕ್ಕೆ ಒಳಗಾಗುವ ಅವಶ್ಯಕತೆ ಇಲ್ಲ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಸ್ಪಷ್ಟಪಡಿಸಿದ್ದಾರೆ. ಮಂಡ್ಯ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ೫ ಸಾವಿರ ಮೆಟ್ರಿಕ್ ಟನ್ ಯೂರಿಯಾ ದಾಸ್ತಾನಿದ್ದು, ಇನ್ನು ಕೆಲವೇ ದಿನದಲ್ಲಿ ೧ ಸಾವಿರದ ೮೦೦ ಮೆಟ್ರಿಕ್ ಟನ್ ಯೂರಿಯಾ ಸರಬರಾಜಾಗಲಿದೆ. ಜಿಲ್ಲೆಯಲ್ಲಿ ಕೃಷಿ ಸಂಬಂಧಿಸಿದ ಚಟುವಟಿಕೆಗಳಿಗೆ ಯಾವುದೇ ತೊಂದರೆಯಾದಂತೆ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದರು. ರಸಗೊಬ್ಬರ ಮಾರಾಟಗಾರರು ತಮ್ಮಲ್ಲಿರುವ ಭೌತಿಕ ಹಾಗೂ ಆನ್‌ಲೈನ್ ದಾಸ್ತಾನು ಒಂದೆ ರೀತಿ ಇರುವಂತೆ ನೋಡಿಕೊಳ್ಳಬೇಕು. ಮಾರಾಟವಾದ ತಕ್ಷಣ ನಮೂದಿಸಿದರೆ ಸರಿಯಾದ ಲೆಕ್ಕ ಸಿಗುತ್ತದೆ. ರಸಗೊಬ್ಬರದ ಕೃತಕ ಕೊರತೆ ಉಂಟಾಗುವ ರೀತಿ ಸನ್ನಿವೇಶ ಸೃಷ್ಟಿಸುವುದು, ಹೆಚ್ಚಿನ ದರಕ್ಕೆ ಮಾರಾಟ ಮಾಡುವುದು ಕಂಡುಬಂದಲ್ಲಿ ಅವರ ವಿರುದ್ಧ ಕಠಿಣ ಕ್ರಮ ಜರುಗಿಸುವುದಾಗಿ ಎಚ್ಚರಿಕೆ ನೀಡಿದರು.

<><><><>

ಹೊಸನಗರ ತಾಲೂಕಿನ ಹೂವಿನಕೋಣೆ ಶಾಲೆಯಲ್ಲಿ ನೀರಿನ ತೊಟ್ಟಿಗೆ ವಿಷ ಬೆರೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತನಿಖೆ ಆದೇಶ ಬೆನ್ನಲ್ಲೇ ಪೊಲೀಸರಿಂದ ತನಿಖೆ ಚುರುಕುಗೊಂಡಿದೆ. ಪ್ರಕರಣ ಭೇದಿಸಲು ಶಿವಮೊಗ್ಗ ಎಸ್‌ಪಿ ಮಿಥುನ್ ಕುಮಾರ್ ಮೂರು ತಂಡಗಳನ್ನು ರಚನೆ ಮಾಡಿದ್ದು, ತನಿಖೆಗಾಗಿ ಒಟ್ಟು ೧೮ ಪೊಲೀಸರ ನಿಯೋಜನೆ ಮಾಡಲಾಗಿದೆ. ತೀರ್ಥಹಳ್ಳಿ ಡಿವೈಎಸ್‌ಪಿ ಅರವಿಂದ್ ಕಲಗುಜ್ಜಿ ನೇತೃತ್ವದಲ್ಲಿ ತಂಡ ರಚನೆ ಆಗಿದೆ. ತಂತ್ರಜ್ಞಾನ ಸಾಕ್ಷ್ಯ ಕಲೆಹಾಲು ಪೊಲೀಸರು ಮುಂದಾಗಿದ್ದಾರೆ. ಟವರ್ ಡಂಪ್ ಮೂಲಕ ತನಿಖೆ ಆರಂಭ ಮಾಡಿದ್ದು, ಟವರ್ ಡಂಪ್ ಹಾಗೂ ಸಿಸಿಟಿವಿ ಪರಿಶೀಲನೆಗೆ ಐದು ಪೊಲೀಸರ ನಿಯೋಜನೆ ಹಾಗೂ ಹೂವಿನಕೋಣೆ ಗ್ರಾಮದ ಸುತ್ತಮುಲ್ಲಿ ದೊರೆಯುವ ಮಾಹಿತಿ ಸಂಗ್ರಹಣೆಗಾಗಿ ಎಂಟು ಸಿಬ್ಬಂದಿ ನಿಯೋಜಿಸಲಾಗಿದೆ. ಅನುಮಾನಸ್ಪದ ವ್ಯಕ್ತಿಗಳ ವಿಚಾರಣೆಗಾಗಿ ಐದು ಪೊಲೀಸರ ನಿಯೋಜನೆ ಮಾಡಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><><><>

ದಕ್ಷಿಣ ಕನ್ನಡ ಜಿಲ್ಲೆಯ ಎಲ್ಲ ತಾಲೂಕು ಆಸ್ಪತ್ರೆಗಳಲ್ಲಿ ಕನಿಷ್ಠ ತಲಾ ಇಬ್ಬರಂತೆ ಸ್ತ್ರೀರೋಗ, ಅರಿವಳಿಕೆ ಹಾಗೂ ಮಕ್ಕಳ ತಜ್ಞರನ್ನು ಕಡ್ಡಾಯಗೊಳಿಸಲು ಕ್ರಮ ವಹಿಸಲಾಗುತ್ತಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಆರೋಗ್ಯ ರಕ್ಷಾ ಸಮಿತಿ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೆಚ್ಚಿನ ಒತ್ತಡ ಇಲ್ಲದ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿನ ತಜ್ಞರನ್ನು ತಾಲೂಕು ಆಸ್ಪತ್ರೆಗಳಿಗೆ ವರ್ಗಾಯಿಸುವ ಮೂಲಕ ತಾಲೂಕು ಆಸ್ಪತ್ರೆಗಳನ್ನು ಬಲಪಡಿಸಲಾಗುವುದು. ಅರಿವಳಿಕೆ ಹಾಗೂ ಸ್ತ್ರೀರೋಗ ತಜ್ಞರು ತಲಾ ಇಬ್ಬರು ಇದ್ದಲ್ಲಿ ದಿನದ ೨೪ ಗಂಟೆಯೂ ಸೇವೆ ನೀಡಲು ಸಾಧ್ಯವಾಗಲಿದೆ ಎಂದರು. ಮಂಗಳೂರಿನ ವೆನ್‌ಲಾಕ್ ಆಸ್ಪತ್ರೆಯಲ್ಲಿ ನೂತನವಾಗಿ ಸಿದ್ಧಗೊಂಡಿರುವ ಕ್ಯಾಥ್‌ಲ್ಯಾಬ್ ಶೀಘ್ರವಾಗಿ ಕಾರ್ಯಾರಂಭಿಸಲಿದೆ. ಇಲ್ಲಿ ಬಿಪಿಎಲ್ ಪಡಿತರ ಚೀಟಿದಾರರಿಗೆ ಆಂಜಿಯೋಪ್ಲಾಸ್ಟಿ ಮೂಲಕ ಸ್ಟಂಟ್ ಅಳವಡಿಕೆ ಸೇರಿದಂತೆ ಹೃದ್ರೋಗ ಶಸ್ತ್ರ ಚಿಕಿತ್ಸೆಗಳು ಉಚಿತವಾಗಿರಲಿದೆ ಎಂದು ಅವರು ಮಾಹಿತಿ ನೀಡಿದರು.

<><><><>

ಉಪ ಲೋಕಾಯುಕ್ತ ಕೆ.ಎನ್.ಫಣೀಂದ್ರ ಅವರು ಮೈಸೂರು ನಗರದ ಕೆ.ಆರ್. ಆಸ್ಪತ್ರೆಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಆಸ್ಪತ್ರೆಯ ಪ್ರತಿ ವಾರ್ಡ್‌ಗೆ ತೆರಳಿ, ಸೂಕ್ತ ಚಿಕಿತ್ಸೆ ದೊರೆಯುತ್ತಿದೆಯೇ, ಶೌಚಾಲಯ, ಊಟದ ವ್ಯವಸ್ಥೆ ಸರಿಯಾಗಿದೆಯೇ ಎಂದು ರೋಗಿಗಳಿಂದ ಮಾಹಿತಿ ಪಡೆದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>